ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ ೨೮೦ ಇಎಸ್‌ಟಿ(೭) ೨೦೧೪ / 2261

ನಿರ್ದೇಶಕರವರ ಕಚೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು.
ದಿನಾಂಕ: ೧೭-೧೧-೨೦೧೮.

**ಜ್ಞಾಪನ**

**ವಿಷಯ:-** ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಕನ್ನಡ ಅನುಷ್ಠಾನದ ಪರಿಶೀಲನೆ ನಡೆಸಲು ಸಮಿತಿ ರಚನೆ ಕುರಿತು.

**ಉಲ್ಲೇಖ:-** ಅಧ್ಯಕ್ಷರ ಆಪ್ತ ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂ. ಕಪ್ರ/ ಆಕಾ/೫೬೧/೨೦೧೮ ದಿನಾಂಕ: ೧೧-೧೦-೨೦೧೮.

*****

ಅಧ್ಯಕ್ಷರ ಆಪ್ತ ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು, ಇವರ ಉಲ್ಲೇಖಿತ ಪತ್ರ ದಿನಾಂಕ: ೧೧/೧೦/೨೦೧೮ರ ಪ್ರತಿಯನ್ನು ಈ ಮೂಲಕ ಲಗತ್ತಿಸಲಾಗಿದೆ. ಈ ಪತ್ರದನ್ವಯ ಕನ್ನಡ ಭಾಷೆಯನ್ನು ರಾಜ್ಯದ ಆಡಳಿತದ ಎಲ್ಲಾ ಮಟ್ಟದಲ್ಲಿ ಅನುಷ್ಠಾನವಾಗುತ್ತಿರುವುದರ ಪರಿಶೀಲನೆಯೂ ಸೇರಿದಂತೆ ಕನ್ನಡ ಭಾಷೆ ಮತ್ತು ಕನ್ನಡ ಜನರ ಹಿತಾಸಕ್ತಿಯನ್ನು ಕಾನೂನಿನ್ವಯ ಸಂರಕ್ಷಿಸುವ ಸಲುವಾಗಿ ರಾಜ್ಯ ಶಾಸನದ ಮೂಲಕ ಕನ್ನಡ ಅಭಿವೃದ್ಧಿ ಪ್ರಾಧಿಕಾರ ರಚನೆಯಾಗಿರುತ್ತದೆ. ಕನ್ನಡ ಭಾಷೆಯನ್ನು ಆಡಳಿತದ ಎಲ್ಲಾ ಹಂತದಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರವು ಹೊರಡಿಸುವ ಆದೇಶಗಳನ್ನು ರಾಜ್ಯ ಸರ್ಕಾರ ಮತ್ತು ಸ್ಥಳಿಯ ನಿಕಾಯಗಳ ಅಧಿಕಾರಿಗಳು ಮತ್ತು ನೌಕರರು ಉಲ್ಲಂಘಿಸಿದರೆ ಅಂತಹ ಉಲ್ಲಂಘನೆಯನ್ನು ಕರ್ತವ್ಯ ಲೋಪವೆಂದು ದಾಖಲಿಸಲು ಮತ್ತು ಅಂತಹವರ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳುವಂತೆ ನೇಮಕಾತಿ ಪ್ರಾಧಿಕಾರಕ್ಕೆ ಸಲಹೆ ನೀಡಲು ರಾಜ್ಯ/ಕೇಂದ್ರ ಸರ್ಕಾರದ ಇಲಾಖೆಗಳು/ಸಂಸ್ಥೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಅಧಿಕಾರ ನೀಡಲಾಗಿದೆ. ಈ ಹಿನ್ನೆಲೆಯಲ್ಲಿ ಆಡಳಿತದಲ್ಲಿನ ಸಂಪೂರ್ಣ ಕನ್ನಡ ಅನುಷ್ಠಾನ ಕುರಿತಂತೆ ಪರಿಶೀಲನೆ ನಡೆಸಲು ಶ್ರೀಮತಿ. ರಶ್ಮಿ.ಜಿ., ಕೆ.ಎ.ಎಸ್. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರ ನೇತ್ರತ್ವದಲ್ಲಿ ಈ ಕೆಳಕಂಡಂತೆ ಸಮಿತಿಯನ್ನು ಪುನರ್ ರಚಿಸಲಾಗಿದೆ.

೧. ಶ್ರೀಮತಿ. ರಶ್ಮಿ.ಜಿ., ಕೆ.ಎ.ಎಸ್. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.

೨. ಶ್ರೀ.ಪುರುಷೋತ್ತಮ. ಆಡಳಿತಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.

೩. ಶ್ರೀ ಡಿ.ವಿ ಶ್ರೀನಿವಾಸಮೂರ್ತಿ, ವಿಷಯ ಪರಿವೀಕ್ಷಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.

೪. ಶ್ರೀ.ವಿ.ಶ್ರೀನಿವಾಸ್, ಹಿರಿಯ ತಾಂತ್ರಿಕ ಸಹಾಯಕರು, ಇ-ಆಡಳಿತ ಘಟಕ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.

೫. ಶ್ರೀ.ಬಿ.ಎನ್. ಶ್ರೀನಿವಾಸ್, ಕಛೇರಿ ಅಧೀಕ್ಷಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.

ಮೇಲ್ಕಂಡ ಸಮಿತಿಯು ಕಛೇರಿಯಲ್ಲಿ ಕನ್ನಡ ಅನುಷ್ಠಾನದ ಪರಿಶೀಲನೆ ಬಗ್ಗೆ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ/ಸರ್ಕಾರಿ/ಅನುದಾನಿತ/ಅನುದಾನರಹಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳಿಗೆ ಅನಿರೀಕ್ಷಿತ ಭೇಟಿ ನೀಡಿದಾಗ ನಿಗದಿತ ನಮೂನೆಯ ಪ್ರಕಾರ ಕನ್ನಡ ಅನುಷ್ಠಾನದ ಬಗ್ಗೆ ಕ್ರಮ ತೆಗೆದುಕೊಂಡಿದ್ದಾರೆಯೇ ಎಂಬ ಬಗ್ಗೆ ಪರಿಶೀಲಿಸಿ ವರದಿ ನೀಡಬೇಕೆಂದು ತಿಳಿಸಲಾಗಿದೆ.

ನಿರ್ದೇಶಕರು

ಇವರಿಗೆ,

ಮೇಲ್ಕಂಡ ಸಮಿತಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಯವರಿಗೆ,

**ಪ್ರತಿ:- ಇವರಿಗೆ ಮಾಹಿತಿಗಾಗಿ**

೧. ಅಧ್ಯಕ್ಷರ ಆಪ್ತ ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.

೨. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು.

೩. ತಾಂತ್ರಿಕ ಶಿಕ್ಷಣ ನಿರ್ದೇಶನಲಯ/ಸರ್ಕಾರಿ/ಅನುದಾನಿತ/ಅನುದಾನರಹಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳ ಎಲ್ಲಾ ಪ್ರಿನ್ಸಿಪಾಲರು/ಅಧಿಕಾರಿಗಳು/ ಸಿಬ್ಬಂದಿಯವರಿಗೆ ಮಹಿತಿಗಾಗಿ - ಇಲಾಖೆಯ ವೆಬ್‌ಸೈಟ್ ಮೂಲಕ.

೪. ಇ-ಆಡಳಿತ ಘಟಕಕ್ಕೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.

೫. ನಿರ್ದೇಶಕರ ಆಪ್ತಶಾಖೆಗೆ.

೬. ಕಡತಕ್ಕೆ.